# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1206
2) ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ವಿಧಾನಸಭಾ ಕ್ಷೇತ್ರ)
3) ಉತ್ತರಿಸಬೇಕಾದ ದಿನಾಂಕ : 17-12-2025
4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಮೀನುಗಾರಿಕಾ ನಿಗಮದ ಚಟುವಟಿಕೆಗಳು ದಿನದಿಂದ ದಿನಕ್ಕೆ ಕುಂಠಿತಗೊಳ್ಳುತ್ತಿದೆ ಎಂಬ ದೂರುಗಳಿದ್ದು, ನಿಗಮಕ್ಕೆ ಹೆಚ್ಚಿನ ಅನುದಾನ ಒದಗಿಸಿ ಹಸಿ ಮೀನುಗಳನ್ನು ಗ್ರಾಹಕರಿಗೆ ವಿತರಿಸುವ ಕ್ರಮ ಕೈಗೊಳ್ಳಬೇಕೆಂಬ ಬೇಡಿಕೆ ಇದ್ದು, ಈ ಬಗ್ಗೆ ಇಲಾಖೆಯು ಕೈಗೊಂಡ ಕ್ರಮವೇನು; | ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮ (ನಿ), ಮಂಗಳೂರು ಸಂಸ್ಥೆಯು ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ ಉದ್ದಿಮೆ ಯಾಗಿರುತ್ತದೆ. ನಿಗಮವು ತನ್ನ ಚಟುವಟಿಕೆಗಳನ್ನು ವಿಸ್ತರಿಸಿಕೊಂಡು 2023-24 ರಲ್ಲಿ ರೂ.231.86 ಕೋಟಿಗಳಿದ್ದ ವಹಿವಾಟು 2024-25 ರಲ್ಲಿ ರೂ.285.79 ಕೋಟಿಗಳಿಗೆ ಏರಿಕೆಯಾಗಿ ನಿಗಮವು ರೂ.5.92 ಕೋಟಿ ಲಾಭಗಳಿಸಿರುತ್ತದೆ.<br><br>ರಾಜ್ಯದಲ್ಲಿ ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ 31 ಮೀನು ಮಾರಾಟ ಕೇಂದ್ರಗಳು ಹಾಗೂ 14 ಮತ್ಸ್ಯದರ್ಶಿನಿಗಳು ನಡೆಸಲಾಗುತ್ತಿದೆ. ಪ್ರಸ್ತುತ ಮೈಸೂರಿನಲ್ಲಿ ಹೈಟೆಕ್ ಮತ್ಸ್ಯದರ್ಶಿನಿಯನ್ನು ಪ್ರಾರಂಭಿಸಲು ಕ್ರಮವಹಿಸಲಾಗಿದೆ. ರಾಜ್ಯದ ಇತರ ಸ್ಥಳಗಳಲ್ಲಿ ಆಸಕ್ತರಿಗೆ ಮತ್ಸ್ಯದರ್ಶಿನಿಯನ್ನು ಏಜನ್ಸಿ ಆಧಾರದಲ್ಲಿ ನಡೆಸಲು ಅವಕಾಶವನ್ನು ನೀಡಲಾಗುತ್ತಿದೆ. |
| ಆ) | ಮೀನುಗಾರಿಕೆ ಇಲಾಖೆಯಿಂದ ಹೆಚ್ಚಿನ ಮೀನುಗಾರಿಕಾ ಸ್ಟಾಲ್ (Stall)ಗಳನ್ನು ತೆರೆಯಲು ಇಲಾಖೆ ಕ್ರಮ ಕೈಗೊಳ್ಳುವುದೇ; | ರಾಜ್ಯದ ವಿವಿಧ ಸ್ಥಳಗಳಲ್ಲಿ ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದಿಂದ 150 ಮತ್ಸ್ಯವಾಹಿನಿ ತ್ರಿಚಕ್ರ ವಾಹನಗಳನ್ನು ವಿತರಿಸಲಾಗಿದೆ. ಮೈಸೂರಿನಲ್ಲಿ ಹೈಟೆಕ್ ಮತ್ಸ್ಯದರ್ಶಿನಿ ಸ್ಥಾಪನೆಗೆ ರೂ.50.00 ಲಕ್ಷಗಳ ಅನುದಾನ ಮಂಜೂರಾಗಿದ್ದು, ಮತ್ಸ್ಯದರ್ಶಿನಿಯನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ. |
| ಇ) | ಮೀನುಗಾರಿಕೆ ಇಲಾಖೆಯಿಂದ ಮಾರುಕಟ್ಟೆಗಳನ್ನು ಅಭಿವೃದ್ಧಿ ಪಡಿಸಲು ಇಲಾಖೆಯ ಮುಂದೆ ಪ್ರಸ್ತಾವನೆ ಇದೆಯೇ?<br>(ವಿವರ ನೀಡುವುದು) | 2024-25ನೇ ಸಾಲಿನ ಆರ್.ಐ.ಡಿ.ಎಫ್. ಟ್ರ್ಯಾಂಚ್-30 ರಡಿ ವಿಜಯಪುರ ಜಿಲ್ಲೆಯ ಭೂತನಾಳದಲ್ಲಿ ಮೀನು ಮಾರುಕಟ್ಟೆ ಸ್ಥಾಪಿಸಲು ರೂ.2.37 ಕೋಟಿ ಮೊತ್ತದ ಅಂದಾಜು ಪಟ್ಟಿ ತಯಾರಿಸಿದ್ದು, ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.<br><br>ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಬೆಂಗಳೂರಿನ ಹೆಬ್ಬಾಳದಲ್ಲಿ ಮತ್ತು ಶಿವಮೊಗ್ಗ ಜಿಲ್ಲೆಯ ಭದ್ರಾವತಿಯಲ್ಲಿ 2 ಅತ್ಯಾಧುನಿಕ ಸುಸಜ್ಜಿತ ಹೈಟೆಕ್ ಮೀನು ಮಾರುಕಟ್ಟೆಗಳನ್ನು ಸ್ಥಾಪಿಸಲು ರೂ.124.00 ಕೋಟಿ ಮೊತ್ತದ ಅಂದಾಜು ಪಟ್ಟಿ ತಯಾರಿಸಿದ್ದು, ಪ್ರಸ್ತಾವನೆಯು ಕೇಂದ್ರ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.<br><br>ಮುಂದುವರೆದು, ಶಿರಾಳಕೊಪ್ಪ (ರೂ.2.5 ಕೋಟಿ), ಕುಶಾಲನಗರ (ರೂ.2.00 ಕೋಟಿ), ಸೋಮವಾರ ಪೇಟೆ (ರೂ.2.00 ಕೋಟಿ), ತೀರ್ಥಹಳ್ಳಿ (ರೂ.1.8 ಕೋಟಿ), ಸೊರಬ (ರೂ.1.5 ಕೋಟಿ), ಆನವಟ್ಟಿ (ರೂ.1.75 ಕೋಟಿ) ಈ ಸ್ಥಳಗಳಲ್ಲಿ ಮೀನು ಮಾರುಕಟ್ಟೆಗಳನ್ನು ನಿರ್ಮಿಸಲು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ (ನಿ.), ಮಂಗಳೂರು ಇವರಿಂದ ಒಟ್ಟು ರೂ.11.55 ಕೋಟಿ ಮೊತ್ತದ ಅಂದಾಜು ಪಟ್ಟಿ ತಯಾರಿಸಲಾಗಿದ್ದು, ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |

ಸಂಖ್ಯೆ: ಪಸಂಮೀ ಇ-211 ಮೀಇಇ 2025

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು